ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## ಸ್ಪರ್ಧಾತ್ಮಕ ಪರೀಕ್ಷೆ–2018ರ (ಕಿದ್ವಾಯಿ) ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ.

### ವೇಳಾಪಟ್ಟಿ

| ದಿನಾಂಕ / ದಿನ | ಹುದ್ದೆ / ವಿಷಯ<br>ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 1.00 | ಹುದ್ದೆ / ವಿಷಯ<br>ಮಧ್ಯಾಹ್ನ 2.00 ರಿಂದ ಸಂಜೆ 5.00 |
|---|---|---|
| 31–08–2018<br>ಶುಕ್ರವಾರ | - | Pharmacist |
| 01–09–2018<br>ಶನಿವಾರ | Assistant Research Scientist | ಕನ್ನಡ ಭಾಷಾ ಪರೀಕ್ಷೆ 150 ಅಂಕಗಳಿಗೆ<br>(ಎಸ್.ಎಸ್.ಎಲ್.ಸಿ / ತತ್ಸಮಾನ ಪರೀಕ್ಷೆಯಲ್ಲಿ ಕನ್ನಡ ವನ್ನು ಮೊದಲನೇ ಅಥವಾ ಎರಡನೇ ಭಾಷೆಯನ್ನಾಗಿ ಅಭ್ಯಸಿಸದೇ ಇರುವ ಅಭ್ಯರ್ಥಿಗಳಿಗೆ ಮಾತ್ರ) |
| 02–09–2018<br>ಭಾನುವಾರ | a. Graduate Pharmacist b. Staff Nurse (GNM)<br>c. Cyto Technician /Junior Medical Laboratory Technician<br>d. Medical Imaging Technologist<br>e. Radio Therapy Technologist / Mould Room Technologist<br>f. Physiotherapist | g. Cyto Technologist<br>h. O.T. Technician<br>i. Staff Nurse (B.Sc. Nursing) |

## ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ. ಸಂ | ಬೆಲ್ ಸಂಖ್ಯೆ | ಬೆಳಗಿನ ಅವಧಿ | ಮಧ್ಯಾಹ್ನದ ಅವಧಿ | ವಿವರಗಳು |
|---|---|---|---|---|
| 01 | ಮೊದಲನೇ ಬೆಲ್ | ಬೆ. 9.40 | ಮ. 1.40 | • ಪ್ರವೇಶ ಪತ್ರವನ್ನು ಮತ್ತು ಗುರುತಿನ ಚೀಟಿಯನ್ನು ತೋರಿಸಿದರೆ ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಮತ್ತು ಗುರುತಿನ ಚೀಟಿಯಲ್ಲಿ ಮುದ್ರಿತವಾಗಿರುವ ಭಾವಚಿತ್ರವನ್ನು ನಾಮಿನಲ್ ರೋಲ್‌ನಲ್ಲಿ ಮುದ್ರಿತವಾಗಿರುವ ಭಾವಚಿತ್ರದೊಂದಿಗೆ ಮತ್ತು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಪರಿಶೀಲಿಸುತ್ತಾರೆ.<br>• ಓಎಂಆರ್ ಉತ್ತರ ಪತ್ರಿಕೆಯು ಅಭ್ಯರ್ಥಿಗೆ ನಿರ್ದಿಷ್ಟವಾಗಿರುತ್ತದೆ. ಪರೀಕ್ಷಾ ಕೊಠಡಿಯಲ್ಲಿ ಅಭ್ಯರ್ಥಿಗಳಿಗೆ ನೀಡಲಾಗುವ ಓಎಂಆರ್ ಉತ್ತರ ಪತ್ರಿಕೆಯಲ್ಲಿ ಅಭ್ಯರ್ಥಿಯ ಪ್ರವೇಶ ಪತ್ರದ (Register No / CET No.) ಸಂಖ್ಯೆ, ಅಭ್ಯರ್ಥಿಯ ಹೆಸರು ಮತ್ತು ಪ್ರಶ್ನೆಪತ್ರಿಕೆಯ ವರ್ಷನ್ ಕೋಡ್ ಅನ್ನು ಮುದ್ರಿಸಲಾಗಿರುತ್ತದೆ |
| 02 | ಎರಡನೇ ಬೆಲ್ | ಬೆ. 9.50 | ಮ.1.50 | • ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು/ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. **"ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ".** ನಂತರ ಲಕೋಟೆಯ ಮೇಲೆ ಹಾಜರಿರುವ ಯಾರಾದರೂ ಇಬ್ಬರು ಅಭ್ಯರ್ಥಿಗಳಿಂದ ಸಹಿಯನ್ನು ಪಡೆಯುತ್ತಾರೆ.<br>• ನಂತರ ಕೊಠಡಿ ಮೇಲ್ವಿಚಾರಕರು ಲಕೋಟೆಯನ್ನು ತೆರೆದು ಕೊಠಡಿಯಲ್ಲಿರುವ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯೊಂದಿಗೆ ಇರುವ ಓಎಂಆರ್ ಉತ್ತರ ಪತ್ರಿಕೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>• ಪರೀಕ್ಷಾ ಕೊಠಡಿಯಲ್ಲಿ ಅಭ್ಯರ್ಥಿಗಳಿಗೆ ನೀಡಲಾಗುವ ಓಎಂಆರ್ ಉತ್ತರ ಪತ್ರಿಕೆಯಲ್ಲಿ ಅಭ್ಯರ್ಥಿಯ ಪ್ರವೇಶ ಪತ್ರದ (CET No.) ಸಂಖ್ಯೆ, ಅಭ್ಯರ್ಥಿಯ ಹೆಸರು ಮತ್ತು ಪ್ರಶ್ನೆಪತ್ರಿಕೆಯ ವರ್ಷನ್ ಕೋಡ್ ಅನ್ನು ಮುದ್ರಿಸಲಾಗಿರುತ್ತದೆ, ಆದ್ದರಿಂದ ಅಭ್ಯರ್ಥಿಗಳು ಕೊಠಡಿ ಮೇಲ್ವಿಚಾರಕರು ತಮಗೆ ನೀಡುವ ಉತ್ತರ ಪತ್ರಿಕೆಯಲ್ಲಿ ಮುದ್ರಿತವಾಗಿರುವ ಸಿಇಟಿ ಸಂಖ್ಯೆ, **ಹೆಸರು** ಹಾಗು ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಸಿಇಟಿ ಸಂಖ್ಯೆ, **ಹೆಸರು** ಒಂದೇ ಆಗಿರುವುದನ್ನು ಖಾತ್ರಿಪಡಿಸಿಕೊಳ್ಳಬೇಕು.<br>• ಪ್ರಶ್ನೆಪತ್ರಿಕೆಯಲ್ಲಿನ **ವರ್ಷನ್ ಕೋಡ್** ಅನ್ನು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಮುದ್ರಿಸಲಾಗಿರುತ್ತದೆ. ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯ ಮತ್ತು ಓ.ಎಂ.ಆರ್. ಉತ್ತರ ಪತ್ರಿಕೆಯ **ವರ್ಷನ್ ಕೋಡ್** ಒಂದೇ ಆಗಿರುವುದನ್ನು ಖಾತ್ರಿಪಡಿಸಿಕೊಳ್ಳಬೇಕು.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಯಾವುದೇ ಅಧಿಕಾರಿ / ಸಿಬ್ಬಂದಿ ವರ್ಗ / ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ. |
| 03 | ಮೂರನೇ ಬೆಲ್ | ಬೆ.10.00 | ಮ. 2.00 | • ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರು ಪುಸ್ತಕವನ್ನು ತೆರೆದು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಅವಕಾಶ ಕೊಡಲಾಗುವುದು.<br>• ಈ ಬೆಲ್ ಅಂದರೆ **ಬೆ.10.00 / ಮ. 2.00** ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಬೆ.11.00 | ಮ.3.00 | • ಇದು ಮೊದಲನೆಯ ಎಚ್ಚರಿಕೆ ಬೆಲ್ – **ಪರೀಕ್ಷೆಯ ಒಂದು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ** |
| 05 | ಐದನೇ ಬೆಲ್ | ಮ..12.00 | ಮ. 4.00 | • ಇದು ಎರಡನೆಯ ಎಚ್ಚರಿಕೆ ಬೆಲ್ – **ಪರೀಕ್ಷೆಯ ಎರಡು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ** |
| 06 | ಆರನೇ ಬೆಲ್ | ಮ.12.55 | ಸಂ. 4.55 | • ಇದು ಕೊನೆಯ ಎಚ್ಚರಿಕೆಯ ಬೆಲ್ ಕೊಠಡಿ ಮೇಲ್ವಿಚಾರಕರು **ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ** ಎಂದು ತಿಳಿಸುತ್ತಾರೆ. |
| 07 | ಏಳನೇ ಹಾಗೂ ಕೊನೆಯ ಬೆಲ್ | ಮ. 1.00 | ಸಂ. 5.00 | • ಪರೀಕ್ಷೆ ಮುಕ್ತಾಯ.<br>• ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಎಡಗೈ ಹೆಬ್ಬೆರಳ ಗುರುತನ್ನು ಹಾಕಲು ಹೇಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಪಡೆಯುವುದು.<br>ಮುಖ್ಯವಾದುದು: **ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು ಓ.ಎಂ.ಆರ್ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಖಾತ್ರಿ ಮಾಡಿಕೊಳ್ಳಬೇಕು.**<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಮೇಲ್ಭಾಗದ ಹಾಳೆಯನ್ನು (ಕೆಇಎ ಪ್ರತಿ) ನಿಧಾನವಾಗಿ ತೆಗೆದು ತಮ್ಮೊಡನೆ ಇಟ್ಟುಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಕೆಳಭಾಗದ ಹಾಳೆಯನ್ನು (ಅಭ್ಯರ್ಥಿಯ ಪ್ರತಿ) ಸಂಬಂಧಿಸಿದ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯ ಜೊತೆಯಲ್ಲಿ ಹಿಂದಿರುಗಿಸಬೇಕು. |

ಸಹಿ/–

**ಕಾರ್ಯನಿರ್ವಾಹಕ ನಿರ್ದೇಶಕರು**